ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು: ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯ ಡಾ : ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಸೂಚಿಸಲಾಗಿದೆ. ಈಗ ಶಾಸನ ರಚನೆ, ವಿಧೇಯಕಗಳನ್ನು ಮಂಡಿಸುವುದು.

5. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಅ. ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ(ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳನ್ನೆ ನಿಯಂತ್ರಣ 2014) ಮಂಡಣೆಗೆ ಅನುಮತಿ ಕೋರಿಕೆ

ಶ್ರೀ.ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು) (ಶ್ರೀ ಆರ್,ವಿ,ದೇಶಪಾಂಡೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಪರವಾಗಿ); ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ,

ಪ್ರಸ್ತಾವನೆ ಹೀಗಿದೆ :

2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಪ್ರಸ್ತಾವವು ಅಂಗೀಕೃತವಾಗಿದೆ

ಮಾನ್ಯ ಮುಖ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು,

ಶ್ರೀ ಟಿ.ಬಿ.ಜಯಚಂದ್ರ (ಕಾನೂನು,ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) (ಶ್ರೀ ಆರ್,ವಿ,ದೇಶಪಾಂಡೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಪರವಾಗಿ);ಮಾನ್ಯ ಅಧ್ಯಕ್ಷರೆ,** 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತರ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ . (ಅನುಬಂಧ–2)

ಆ. **ಹೈದರಾಬಾದ್ – ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ವಿಧೇಯಕ, 2014 ಮಂಡನೆಗೆ ಅನುಮತಿ ಕೋರಿಕೆ**

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ, ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು) ಶ್ರೀ ಎಸ್.ಆರ್ ಪಾಟೀಲ್ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ